ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಕೊಡಗು ಜಿಲ್ಲೆ ಮಡಿಕೇರಿ ನಗರಸಭೆಯ ತ್ಯಾಜ್ಯ ಸಂಸ್ಕರಣಾ ಘಟಕವನ್ನು ಸ್ಟೋನ್‌ಹಿಲ್ ನಿಂದ ನಗರದ ಹೊರಭಾಗಕ್ಕೆ ಸ್ಥಳಾಂತರಿಸುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು):-

1563 (1789) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆಯ ತನ್ನ ತ್ಯಾಜ್ಯ ಸಂಸ್ಕರಣಾ ಘಟಕವನ್ನು ಸ್ಟೋನ್‌ಹಿಲ್ ಎಂಬ ಪ್ರದೇಶದಲ್ಲಿ ಹೊಂದಿದ್ದು, ಸದರಿ ಘಟಕವು ಜನವಸತಿಯ ಮಧ್ಯಭಾಗದಲ್ಲಿ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಘಟಕವನ್ನು ಜನವಸತಿ ಪ್ರದೇಶದಿಂದ ದೂರದ ಪ್ರದೇಶಕ್ಕೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗಿದೆಯೇ;

(ಇ) ಕ್ರಮ ಕೈಗೊಂಡಿದ್ದಲ್ಲಿ, ಸ್ಥಳಾಂತರದ ನಂತರ ಸದರಿ ಘಟಕವನ್ನು ಎಷ್ಟು ವಿಸ್ತೀರ್ಣದಲ್ಲಿ, ಯಾವ ಸ್ಥಳದಲ್ಲಿ ನಿರ್ಮಾಣ ಮಾಡಲಾಗುವುದು ?